ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–337

**30 ಮೇ 2026 * ಶನಿವಾರ * ಸಂಜೆ 6.00**

**ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು**

---

ದಿವ್ಯಾಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ

**ಶ್ರೀ ಇಮ್ಮಡಿ ಉದ್ದಾನ ಸ್ವಾಮಿಗಳು**
ಶ್ರೀ ವಿರಕ್ತ ಮಠ, ಮೂಡುಗೂರು
ಗುಂಡ್ಲುಪೇಟೆ ತಾ.

ಉಪನ್ಯಾಸ

**ಡಾ. ಪ್ರಸನ್ನ ಸಂತೇಕಡೂರು**
ಪ್ರಾಧ್ಯಾಪಕರು, ಜೀವರಸಾಯನ ಶಾಸ್ತ್ರ ವಿಭಾಗ
ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು

**ವಿಷಯ : ವಚನ ಸಾಹಿತ್ಯದಲ್ಲಿ ಜೀವನ ಮೌಲ್ಯಗಳು**

ವಚನ ಗಾಯನ

**ಕು. ಎನ್. ಚೂಡಾಮಣಿ**
**ಶ್ರೀ ಉಮ್ಮತ್ತೂರು ಆರ್. ಉಮೇಶ್ ಮತ್ತು ಶ್ರೀ ನಟರಾಜು**

---

ಪ್ರಾಯೋಜಕರು

**ಲಿಂ. ಶ್ರೀಮತಿ ಎಸ್. ಪುಟ್ಟಮ್ಮಣ್ಣಿ ಮತ್ತು**
**ಲಿಂ. ಶ್ರೀ ಎಂ. ಗುರುಮಲ್ಲಪ್ಪನವರ ಕುಟುಂಬ**
ಉಮ್ಮತ್ತೂರು, ಚಾಮರಾಜನಗರ ತಾ.

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಇಮ್ಮಡಿ ಉದ್ಧಾನ ಸ್ವಾಮಿಗಳು** ಎಂಸಿಎ ಪದವೀಧರರು. ಮೂಡುಗೂರು ಶ್ರೀ ವಿರಕ್ತ ಮಠದ ಶ್ರೀ ಮಹಾದೇವ ಸ್ವಾಮಿಗಳ ಕರಕಮಲಸಂಜಾತರು. ಶರಣರ ವಿಚಾರಗಳನ್ನು ಪ್ರವಚನದ ಮೂಲಕ ಭಕ್ತರಿಗೆ ತಿಳಿಸುತ್ತಿದ್ದಾರೆ. "ಮರ ಬೆಳೆಸಿ-ಧರೆ ಉಳಿಸಿ" ಎಂಬ ಅಭಿಯಾನ ಕೈಗೊಂಡು ಪರಿಸರ ಸಂರಕ್ಷಣೆ ಹಾಗೂ ಸಾವಯವ ಕೃಷಿಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸುತ್ತಿದ್ದಾರೆ. ವಚನ ಮಾಂಗಲ್ಯದ ಮೂಲಕ ಸರಳ ವಿವಾಹಗಳನ್ನು ನಡೆಸುತ್ತಿದ್ದಾರೆ. ಶ್ರೀ ಮಠದಲ್ಲಿ ಆರಾಧನೆ, ವಿಶೇಷ ಪೂಜೆಗಳ ಮೂಲಕ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ.

**ಡಾ. ಪ್ರಸನ್ನ ಸಂತೇಕಡೂರುರವರು** ಶಿವಮೊಗ್ಗದ ಸಂತೇಕಡೂರಿನವರು. ಎಂಎಸ್ಸಿ, ಪಿಎಚ್.ಡಿ. ಪದವೀಧರರು. ಅಮೇರಿಕಾದ ರಿಚ್ಮಂಡ್ ನಗರದ ವರ್ಜೀನೀಯಾ ಕಾಮನ್‌ವೆಲ್ತ್ ವಿಶ್ವವಿದ್ಯಾಲಯದಲ್ಲಿ ಪೋಸ್ಟ್ ಡಾಕ್ಟೋರಲ್ ಫೆಲೋ ಆಗಿ, ನಂತರ ಅಲ್ಲಿಯೇ ಹಂಟರ್ ಹೋಲ್ಮ್ ಮ್ಯಾಕ್ವಾಯಿರ್ ಸಂಶೋಧನಾ ಕೇಂದ್ರ ಮತ್ತು ವರ್ಜೀನೀಯಾ ಕಾಮನ್ ವೆಲ್ತ್ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿದ್ದರು. ರಾಜ್ಯ ಸರ್ಕಾರದ ಸರ್ ಸಿ.ವಿ. ರಾಮನ್ ಯುವ ವಿಜ್ಞಾನಿ ಪ್ರಶಸ್ತಿ, ಪ್ರೊ. ವೈ.ಟಿ. ತಾತಾಚಾರಿ ದತ್ತಿ ಪ್ರಶಸ್ತಿಗಳಿಗೆ ಭಾಜನರು. ವಿಜ್ಞಾನದ ಜೊತೆಗೆ ಸಾಹಿತ್ಯದಲ್ಲಿಯೂ ಆಸಕ್ತರಾಗಿದ್ದು, ಹಲವು ಕೃತಿಗಳನ್ನು ರಚಿಸಿದ್ದಾರೆ.

**ಶ್ರೀ ಜಿ. ರವಿಶಂಕರ್‌ರವರು** ಚಾಮರಾಜನಗರ ತಾಲ್ಲೂಕು ಉಮ್ಮತ್ತೂರು ಗ್ರಾಮದ ಸಮಾಜ ಸೇವಕರಾಗಿದ್ದ ಶ್ರೀ ಎಂ. ಗುರುಮಲ್ಲಪ್ಪ ಮತ್ತು ಶ್ರೀಮತಿ ಎಸ್. ಪುಟ್ಟಮ್ಮಣ್ಣಿರವರ ಮಕ್ಕಳಾದ ಶ್ರೀಮತಿ ಜಿ. ಶೀಲಾ, ಶ್ರೀಮತಿ ಜಿ. ಯಮುನಾ, ಶ್ರೀ ಜಿ. ಮಹೇಶ್‌ರವರ ಸಹೋದರರು. ಹೆಚ್.ಡಿ. ಕೋಟೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ರಾಜ್ಯ ಸರ್ಕಾರದಿಂದ ಎನ್‌ಎಸ್‌ಎಸ್ ಪ್ರಶಸ್ತಿ, ರಾಷ್ಟ್ರೀಯ ಯುವನಾಯಕತ್ವ ಪ್ರಶಸ್ತಿ ಹಾಗೂ ಇಲಾಖಾ ಸರ್ವೋತ್ತಮ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.